**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ದಂಡಾಧಿಕಾರಿಗಳು,**
**ಹೆಗ್ಗಡದೇವನಕೋಟೆ.**

# O.S. No. 241/2016

| | | |
|---|---|---|
| ಸಾಕ್ಷಿದಾರರ ಹೆಸರು | : | ಚಿಕ್ಕಮಣಿ |
| ತಂದೆಯ ಹೆಸರು | : | ಶ್ರೀನಿವಾಸ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ಇಟ್ನಾ ಗ್ರಾಮ, ಸರಗೂರು ತಾ. |

**ಸಾಕ್ಷಿಯನ್ನು ದಿನಾಂಕಃ 13.01.2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎನ್.ಆರ್.ಎನ್. ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಗ್ರಾಮ ಲೆಕ್ಕಾಧಿಕಾರಿಯವರು ನೀಡಿರುವ ನನ್ನ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-1 ಎಂದು ಗುರುತಿಸಲಾಯಿತು.

ಇಟ್ನಾ ಗ್ರಾಮದ ಸ.ನಂ. 11/7, 11/8 ಮತ್ತು 10/2 ಕ್ಕೆ ಸಂಬಂಧಿಸಿದ 03 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-2 ರಿಂದ ನಿ.ಪಿ.-4 ಎಂದು ಗುರುತಿಸಲಾಯಿತು.

**O.S. No. 241/2016**
**ಪಿ..ಡಬ್ಲ್ಯು–01**

ಇಟ್ನಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ನೀಡಿರುವ 02 ಪುಟಗಳುಳ್ಳ Assessment Register Extract ಅನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.–5 ಎಂದು ಗುರುತಿಸಲಾಯಿತು.

ನನ್ನ ವಕೀಲರು ನೀಡಿದ ಲೀಗಲ್ ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.–6 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ವಾದಿ ಪರ ವಕೀಲರು ಮುಂದಿನ ಮುಖ್ಯ ವಿಚಾರಣೆಗಾಗಿ ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**